# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 568 (759) |
| ಮಾನ್ಯ ಸದಸ್ಯರ ಹೆಸರು | ಶ್ರೀ ಕೆ.ಅಬ್ದುಲ್ ಜಬ್ಬರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 12 /12/2025 |
| ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಾರ್ಮಿಕ ಇಲಾಖೆಯ ಕಟ್ಟಡ ಕಾರ್ಮಿಕ ಮತ್ತು ಇತರೆ ನಿರ್ಮಾಣ ಮಂಡಳಿಯಡಿ ಕಾರ್ಮಿಕರಿಗೆ ಯಾವ ಯಾವ ಸೌಲಭ್ಯಗಳನ್ನು ನೀಡಲಾಗುತ್ತಿದೆ; | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯವತಿಯಿಂದ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ಹಾಗೂ ಅವರ ಅವಲಂಭಿತರಿಗೆ ವಿತರಿಸುತ್ತಿರುವ ವಿವಿಧ ರೀತಿಯ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳ ವಿವರವನ್ನು ಅನುಬಂಧದಲ್ಲಿ ಒದಗಿಸಿದೆ. |
| ಆ) | ಸದರಿ ಕಾರ್ಮಿಕರಿಗೆ ಯಾವ ಯಾವ ರೀತಿ ಪಿಂಚಣಿ ಸೌಲಭ್ಯಗಳ್ಳು ಒದಗಿಸಲಾಗುತ್ತಿದೆ; | ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ನೋಂದಾಯಿತ ಫಲಾನುಭವಿಗಳಿಗೆ ಹಾಗೂ ಅವರ ಅವಲಂಭಿತರಿಗೆ ವಿತರಿಸುತ್ತಿರುವ ಪಿಂಚಣಿ ಸಹಾಯ ಧನ ಸೌಲಭ್ಯದ ವಿವರ ಈ ಕೆಳಕಂಡಂತಿದೆ.<br><br>1. ಪಿಂಚಣಿ ಸೌಲಭ್ಯ: ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆ ಮಾಸಿಕ ರೂ.3,000/-<br>2. ಕುಟುಂಬ ಪಿಂಚಣಿ ಸೌಲಭ್ಯ: ಮೃತ ಪಿಂಚಣಿದಾರರ ಪತಿ/ಪತ್ನಿಗೆ ಮಾಸಿಕ ರೂ.1500/-<br>3. ದುರ್ಬಲತೆ ಪಿಂಚಣಿ: ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾ ಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ /ಭಾಗಶಃ ಅಂಗ ವಿಕಲತೆ ಹೊಂದಿದ್ದರೆ ಮಾಸಿಕ ರೂ.2,000/- ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ ರೂ. 2,00,000/- ದವರೆಗೆ ಅನುಗ್ರಹ ರಾಶಿ ಸಹಾಯಧನ. |

<table>
<tr>
<td>ಇ)</td>
<td>ಕಳೆದ 2 ವರ್ಷಗಳಲ್ಲಿ ಪಿಂಚಣಿ ಸೌಲಭ್ಯಗಳಿಗಾಗಿ ಸ್ವೀಕೃತವಾದ ಅರ್ಜಿಗಳ ಸಂಖ್ಯೆ ಎಷ್ಟು; ಸೌಲಭ್ಯ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು; (ಸಂಪೂರ್ಣ ಮಾಹಿತಿ ಒದಗಿಸುವುದು)</td>
<td>ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯವತಿಯಿಂದ ಕಳೆದ 02 ವರ್ಷದಲ್ಲಿ ಪಿಂಚಣಿ ಸಹಾಯ ಧನ ಕೋರಿ ಸ್ವೀಕೃತವಾದ ಅರ್ಜಿಗಳ ಸಂಖ್ಯೆ. 7614.<br><br>ಈ ಸೌಲಭ್ಯದಡಿ ಕಳೆದ 02 ವರ್ಷ ದಲ್ಲಿ ಸಹಾಯ ಧನ ಪಡೆದ ಫಲಾನುಭವಿಗಳ ಸಂಖ್ಯೆ ಈ ಕೆಳಕಂಡಂತಿದೆ.
<table>
<tr><th>ಸೌಲಭ್ಯ</th><th>ಫಲಾನುಭವಿಗಳ ಸಂಖ್ಯೆ</th></tr>
<tr><td>ಪಿಂಚಣಿ ಸಹಾಯ ಧನ</td><td>10020<br>(2015-2016 ರಿಂದ ಇಲ್ಲಿಯವರೆಗೆ )</td></tr>
<tr><td>ಕುಟುಂಬ ಪಿಂಚಣಿ ಸೌಲಭ್ಯ</td><td>88</td></tr>
<tr><td>ದುರ್ಬಲತೆ ಪಿಂಚಣಿ</td><td>309</td></tr>
</table>
</td>
</tr>
<tr>
<td>ಈ)</td>
<td>ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನದಡಿ ಸ್ವೀಕೃತಗೊಂಡಿರುವ ಅರ್ಜಿಗಳ ಸಂಖ್ಯೆ ಎಷ್ಟು; ಪ್ರಯೋಜನ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು?</td>
<td>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ವತಿಯಿಂದ ಕಳೆದ 02 ವರ್ಷದಲ್ಲಿ ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನದಡಿ ಸ್ವೀಕೃತಗೊಂಡಿರುವ ಅರ್ಜಿಗಳ ಸಂಖ್ಯೆ. 7856 ಈ ಸೌಲಭ್ಯದಡಿ ಸಹಾಯ ಧನ ಪಡೆದ ಫಲಾನುಭವಿಗಳ ಸಂಖ್ಯೆ 7814.</td>
</tr>
</table>

**ಕಾಇ 485 ಎಲ್‌ಇಟಿ 2025**

**(ಸಂತೋಷ್ ಎಸ್ ಲಾಡ್)**
**ಕಾರ್ಮಿಕ ಸಚಿವರು**

# ಅನುಬಂಧ-1

## ಮಂಡಳಿಯ ವತಿಯಿಂದ ಫಲಾನುಭವಿಗಳಿಗೆ ಮತ್ತು ಅವರ ಅವಲಂಭಿತರಿಗೆ ಅನುಷ್ಠಾನಗೊಳಿಸುತ್ತಿರುವ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳ ವಿವರ

1. **ಪಿಂಚಣಿ ಸೌಲಭ್ಯ:** ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆ ಮಾಸಿಕ ರೂ.3,000/-
2. **ಕುಟುಂಬ ಪಿಂಚಣಿ ಸೌಲಭ್ಯ:** ಮೃತ ಪಿಂಚಣಿದಾರರ ಪತಿ/ಪತ್ನಿಗೆ ಮಾಸಿಕ **ರೂ.1500/-**
3. **ದುರ್ಬಲತೆ ಪಿಂಚಣಿ:** ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾ ಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ /ಭಾಗಶಃ ಅಂಗ ವಿಕಲತೆ ಹೊಂದಿದ್ದರೆ ಮಾಸಿಕ **ರೂ.2,000/-** ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ **ರೂ.2,00,000/-** ದವರೆಗೆ ಅನುಗ್ರಹರಾಶಿ ಸಹಾಯಧನ.
4. **ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ** ಮರುಪಾವತಿ ಸೌಲಭ್ಯ (ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ).
5. **ಟ್ರೆನಿಂಗ್-ಕಮ್-ಟೂಲ್‌ಕಿಟ್ಸ್ ಸೌಲಭ್ಯ (ಶ್ರಮ ಸಾಮರ್ಥ್ಯ): ರೂ.20,000/- ವರೆಗೆ.**
6. **ವಸತಿ ಸೌಲಭ್ಯ (ಕಾರ್ಮಿಕ ಗೃಹಭಾಗ್ಯ): ರೂ.2,00,000/-** ದವರೆಗೆ ಮುಂಗಡ ಸೌಲಭ್ಯ.
7. **ಟ್ರೆನಿಂಗ್-ಕಮ್-ಟೂಲ್‌ಕಿಟ್ಸ್ ಸೌಲಭ್ಯ (ಶ್ರಮ ಸಾಮರ್ಥ್ಯ): ರೂ.20,000/- ವರೆಗೆ.**
8. **ವಸತಿ ಸೌಲಭ್ಯ (ಕಾರ್ಮಿಕ ಗೃಹಭಾಗ್ಯ): ರೂ.2,00,000/-** ದವರೆಗೆ ಮುಂಗಡ ಸೌಲಭ್ಯ.
9. **ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀಬಾಂಡ್):** ಮಹಿಳಾ ಫಲಾನುಭವಿಯ ಮೊದಲ ಎರಡು ಮಗುವಿನ ಜನನಕ್ಕೆ ರೂ.50,000/-.
10. **ಅಂತ್ಯಕ್ರಿಯೆ ವೆಚ್ಚ:ರೂ.4,000/-** ಹಾಗೂ ಅನುಗ್ರಹ ರಾಶಿ **ರೂ.1,46,000**/- ಸಹಾಯಧನ.

| ಕ್ರ. ಸಂ. | ಕೋರ್ಸ್/ತರಗತಿ | ತರಗತಿ/ಪದವಿ (ಪ್ರತಿ ವರ್ಷಕ್ಕೆ) (ರೂ.ಗಳಲ್ಲಿ) | ಸ್ನಾತ್ತಕೋತ್ತರ ಪದವಿ (ಪ್ರತಿ ವರ್ಷಕ್ಕೆ) (ರೂ.ಗಳಲ್ಲಿ) |
|---|---|---|---|
| **1** | 1ನೇ ತರಗತಿಯಿಂದ 5ನೇ ತರಗತಿ | **1,800/-** | - |
| **2** | 6ನೇ ತರಗತಿಯಿಂದ 8ನೇ ತರಗತಿ | **2,400/-** | - |
| **3** | 9 ಮತ್ತು 10ನೇ ತರಗತಿ | **3,000/-** | - |
| **4** | ಪಿಯುಸಿ, 11 ಹಾಗೂ 12ನೇ ತರಗತಿ ಅಥವಾ ತತ್ಸಮಾನ ಕೋರ್ಸ್. | **6,000/-** | - |
| **5** | 10ನೇ ತರಗತಿ ನಂತರದ ಐಟಿಐ/ ತತ್ಸಮಾನ ತಾಂತ್ರಿಕ ಕೋರ್ಸ್‌ಗಳು | **10,000/-** | - |
| **6** | ಪಿಯುಸಿ ನಂತರದ ಯಾವುದೇ ಡಿಪ್ಲೋಮ ತರಗತಿ. | **12,000/-** | - |
| **7** | ಸಾಮಾನ್ಯ ಪದವಿ (ಜನರಲ್ ಡಿಗ್ರಿ) - ಬಿಎ, ಬಿಕಾಂ, ಬಿಎಸ್ಸಿ ಮುಂತಾದವಗಳು | **15,000/-** | **20,000/-** |
| **8** | 03 ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ **Vocational** ವೃತ್ತಿಪರ ಕೋರ್ಸ್‌ಗಳು ಕಾನೂನು ಪದವಿ ಸಹಿತ (Professional Courses) | **20,000/-** | **25,000/-** |
| **9** | ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ ತಾಂತ್ರಿಕ ವೃತ್ತಿಪರ ಕೋರ್ಸ್‌ಗಳು (Professional Courses) | **25,000/-** | **35,000/-** |
| **10** | 03 ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ ಅರೆ ವೈದ್ಯಕೀಯ ವೃತ್ತಿಪರ ಕೋರ್ಸ್‌ಗಳು (Para Medical Courses) | **20,000/-** | **25,000/-** |

| | | | |
|---|---|---|---|
| **11** | 03 ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ ವೈದ್ಯಕೀಯ ವೃತ್ತಿಪರ ಕೋರ್ಸ್‌ಗಳು (Professional Courses) | **25,000/-** | **35,000/-** |
| **12** | ರಾಷ್ಟ್ರೀಯ ಕಾನೂನು ಶಾಲೆಗಳಿಗೆ ಸಮನಾದ ಕಾನೂನು ವಿದ್ಯಾ ಸಂಸ್ಥೆಗಳು | **40,000/-** | **50,000/-** |
| **13** | ಪಿಹೆಚ್‌ಡಿ/ಎಂಫಿಲ್ (03 ವರ್ಷ ಅವಧಿಯವರೆಗೆ) | **40,000/-** | - |
| **14** | IIT, IIIT, AIMS, IISc, IISERC ನಂತಹ ಪ್ರತಿಷ್ಠಿತ ರಾಷ್ಟ್ರೀಯ ವಿದ್ಯಾಸಂಸ್ಥೆಗಳು. | **50,000/-** | **60,000/-** |

11. **ವೈದ್ಯಕೀಯ ಸಹಾಯ ಧನ (ಕಾರ್ಮಿಕ ಆರೋಗ್ಯ ಭಾಗ್ಯ):** ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಭಿತರಿಗೆ **ರೂ.300/- ರಿಂದ ರೂ.20,000/- ವರೆಗೆ.**
12. **ಅಪಘಾತ ಪರಿಹಾರ:** ನೊಂದಾಯಿತ ಕಟ್ಟಡ ಕಾರ್ಮಿಕರು ಕೆಲಸದ ಸ್ಥಳದಲ್ಲಿ **ಮರಣ** ಹೊಂದಿದ್ದಲ್ಲಿ **ರೂ.8,00,000/- ಹಾಗೂ** ಸಂಪೂರ್ಣ ಶಾಶ್ವತ ದುರ್ಬಲತೆಯಾದಲ್ಲಿ **ರೂ.2,00,000/-.**
13. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ**): ಹೃದ್ರೋಗ, ಕಿಡ್ನಿ ಜೋಡಣೆ, ಕ್ಯಾನ್ಸರ್ ಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದ ತೊಂದರೆಗೆ ಸಂಬಂಧಿತ ಚಿಕಿತ್ಸೆ, ಮೂತ್ರಪಿಂಡದಲ್ಲಿನ ಕಲ್ಲುತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದ ಚಿಕಿತ್ಸೆ, ಅಲ್ಸರ್ ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ , ಕಿಡ್ನಿಶಸ್ತ್ರ ಚಿಕಿತ್ಸೆ, ಇ.ಎನ್.ಟಿ ಚಿಕಿತ್ಸೆ, ಶಸ್ತ್ರ ಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕುಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರ ಚಿಕಿತ್ಸೆ, ವ್ಯಾಸ್ಕುಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರ ಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆಮುರಿತ/ ಡಿಸ್‌ಲೊಕೇಶನ್ ಚಿಕಿತ್ಸೆ, ಇತರೆ ಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ **ರೂ.2,00,000/-ವರೆಗೆ.**
14. **ಮದುವೆ ಸಹಾಯ ಧನ (ಗೃಹ ಲಕ್ಷ್ಮೀ ಬಾಂಡ್):** ಫಲಾನುಭವಿ ಅಥವಾ ಅವರ ಇಬ್ಬರು ಮಕ್ಕಳ ಮದುವೆಗೆ **ತಲಾ ರೂ.60,000/-.**
15. **ತಾಯಿ ಮಗು ಸಹಾಯ ಹಸ್ತ:** ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ **ರೂ.6,000/- ಗಳ** ಸಹಾಯಧನ.